ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದಲ್ಲಿರುವ ಸಹಕಾರ ಸಂಘಗಳ ಕಾರ್ಯ ವೈಖರಿಗಳ ಬಗ್ಗೆ

ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು):-

176 (217) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18, 2018-19, 2019-20, 2020-21ನೇ ಸಾಲಿನಲ್ಲಿ ಸಹಕಾರ ಸಂಘಗಳ ಮೂಲಕ ವಿತರಿಸಲಾದ ಸಾಲದ ಪ್ರಮಾಣವೆಷ್ಟು; (ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ನೀಡಲಾದ ಸಾಲದಲ್ಲಿ ಇದುವರೆವಿಗೆ ಎಷ್ಟು ವಸೂಲಾಗಿದೆ;

(ಇ) ರಾಜ್ಯದಲ್ಲಿ ಪ್ರಸ್ತುತ ಯಾವ ಯಾವ ಬಡ್ಡಿ ದರದಲ್ಲಿ ರೈತರಿಗೆ ಸಾಲ ನೀಡಲಾಗುತ್ತಿದೆ;

(ಈ) ಕಳೆದ 1 ವರ್ಷದಿಂದ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲ ಪಡೆದ ರೈತರೆಷ್ಟು; (ಕ್ಷೇತ್ರವಾರು ವಿವರ ನೀಡುವುದು)

(ಉ) ಸುಸ್ತಿಯಾದ ರೈತರ ಸಂಖ್ಯೆ ಎಷ್ಟು? (ಕ್ಷೇತ್ರವಾರು ಮಾಹಿತಿ ನೀಡುವುದು)